ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ತೋಟಗಾರಿಕೆ ಬೆಳೆಗಳ ಮಾರಾಟಕ್ಕೆ ಸಮರ್ಪಕ ಮಾರುಕಟ್ಟೆ ವ್ಯವಸ್ಥೆ ಕುರಿತು

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) -

16 (184) ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ರೈತರು ಬೆಳೆದ ತೋಟಗಾರಿಕಾ ಬೆಳೆಗಳನ್ನು ಸಮರ್ಪಕವಾಗಿ ಮಾರಾಟ ಮಾಡಲು ಯಾವ ವ್ಯವಸ್ಥೆಗಳು ಅಸ್ತಿತ್ವದಲ್ಲಿವೆ ; (ವಿವರ ನೀಡುವುದು)

(ಆ) ತೋಟಗಾರಿಕಾ ಬೆಳೆಗಳನ್ನು ಸಮರ್ಪಕವಾಗಿ ಹಾಗೂ ಸೂಕ್ತ ಬೆಲೆಗೆ ಮಾರಾಟ ಮಾಡಲು ಪೂರಕ ವ್ಯವಸ್ಥೆಗಳ ಕೊರತೆ ಹಿನ್ನೆಲೆಯಲ್ಲಿ ರೈತರು ಪರಿತಪ್ಪಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ;

(ಇ) ಈ ತೋಟಗಾರಿಕಾ ಬೆಳೆಗಳನ್ನು ಮಾರಾಟ ಮಾಡಲು ನಗರ ವ್ಯಾಪ್ತಿಯಲ್ಲಿರುವ ಹಾಪ್‌ಕಾಮ್ಸ್ (APMC) ವ್ಯಾಪಾರ ಮಳಿಗೆಗಳ ರೀತಿಯಲ್ಲಿ ರಾಜ್ಯದ ಜಿಲ್ಲಾ ಮತ್ತು ತಾಲ್ಲೂಕು ಹಂತದ ಪಟ್ಟಣಗಳಲ್ಲಿ ಸ್ಥಾಪಿಸಲು ಸರ್ಕಾರ ಚಿಂತನೆ ನಡೆಸಿದೆಯೇ; (ವಿವರ ನೀಡುವುದು)

(ಈ) ತೋಟಗಾರಿಕಾ ಬೆಳೆಗಳನ್ನು ಮಾರಾಟ ಮಾಡಲು ಬರುವ ರೈತರು ದಲ್ಲಾಳಿಗಳಿಂದ ಶೋಷಣೆಗೊಳಪಟ್ಟಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು ?